## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2026-27ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ **ಹೆಸರುಕಾಳು** ಖರೀದಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಇವರ ಪತ್ರ ಸಂ.ಕೃಮಾಮಂ/ಪ್ರೊ/20/ 1312/2026-27, ದಿನಾಂಕ:04.08.2026
2. ಸರ್ಕಾರದ ಪತ್ರ ಸಂಖ್ಯೆ:ಸಿಒ 259 ಎಂಆರ್‌ಇ 2026, ದಿನಾಂಕ:11.08.2026 & 02.09.2026
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆF.No.L-15016/79/2026-MPS (197424), ದಿ:29.09.2026.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಇವರ ಸಂಖ್ಯೆ: ಕೃಮಾಮಂ/ಪ್ರೊ/1594/ 2026-27, ದಿನಾಂಕ: 01.10.2026.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (01)ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಇವರು ಹೆಸರುಕಾಳು ಉತ್ಪನ್ನವು ರಾಜ್ಯದ ಪ್ರಮುಖ ಬೆಳೆಯಾಗಿದ್ದು, 2026-27ನೇ ಸಾಲಿಗೆ ರಾಜ್ಯದ ಪ್ರಮುಖ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ, ಹಾವೇರಿ, ಗದಗ, ಬಾಗಲಕೋಟೆ, ಕೊಪ್ಪಳ, ಬೀದರ್, ಬೆಳಗಾವಿ, ವಿಜಯಪುರ, ತುಮಕೂರು, ಹಾಸನ, ಧಾರವಾಡ ಮತ್ತು ಚಾಮರಾಜನಗರ ಹಾಗೂ ಇತರೆ ಸೇರಿ ಕೃಷಿ ಇಲಾಖೆ ಅಂಕಿ-ಅಂಶಗಳ ಪ್ರಕಾರ ಅಂದಾಜು 4.50 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ಅಂದಾಜು 1.64 ಲಕ್ಷ ಮೆಟ್ರಿಕ್ ಟನ್ ಪ್ರಮಾಣದ ಹೆಸರುಕಾಳು ಉತ್ಪಾದನೆಯನ್ನು ನಿರೀಕ್ಷಿಸಲಾಗಿದೆ. ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಉತ್ಪನ್ನಕ್ಕೆ ಬೆಂಬಲ ಬೆಲೆ ಪ್ರತಿ ಕ್ವಿಂಟಾಲ್‌ಗೆ ರೂ.8,780/- ರಂತೆ ಘೋಷಿಸಲಾಗಿರುತ್ತದೆ.

ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ ಮತ್ತು ಗದಗ ಜಿಲ್ಲೆ ಹಾಗೂ ಅಧ್ಯಕ್ಷರು, ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಇವರು ಪ್ರಸ್ತುತ ಮಾರುಕಟ್ಟೆಗಳಲ್ಲಿ ಆವಕವಾಗುತ್ತಿರುವ ಹೆಸರುಕಾಳು ಉತ್ಪನ್ನವು ಪ್ರತಿ ಕ್ವಿಂಟಾಲ್‌ಗೆ ರೂ.5,500/- ರಿಂದ 8,100/-ಗಳ ಧಾರಣೆ ಇದ್ದು, ಆಗಸ್ಟ ಮಾಹೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಾರುಕಟ್ಟೆಗೆ ಆವಕವಾಗುವುದರಿಂದ, ಪ್ರಸ್ತುತ ಸಾಲಿಗೆ ಕೇಂದ್ರ ಸರ್ಕಾರವು ಹೆಸರುಕಾಳು ಉತ್ಪನ್ನಕ್ಕೆ ಪ್ರತಿ ಕ್ವಿಂಟಾಲ್ ಗೆ ರೂ.8,780/- ರ ಬೆಂಬಲ ಬೆಲೆ ಘೋಷಿಸಿರುವಂತೆ, ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆದು, ರೈತರಿಗೆ ಅನುಕೂಲ ಕಲ್ಪಿಸಿಕೊಡುವಂತೆ ಪ್ರಸ್ತಾವನೆ ಸಲ್ಲಿಸಿರುವ ಹಿನ್ನಲೆಯಲ್ಲಿ, 2026-27ನೇ ಸಾಲಿಗೆ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನ ಹೆಸರುಕಾಳು ಖರೀದಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(02)ರ ಸರ್ಕಾರದ ಪತ್ರದಲ್ಲಿ, 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದಲ್ಲಿ ಹೆಸರುಕಾಳು ಖರೀದಿಸಲು ಅನುಮತಿ ನೀಡುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(03)ರ ಪತ್ರದಲ್ಲಿ, ಕೇಂದ್ರ ಸರ್ಕಾರವು ಬೆಂಬಲ ಬೆಲೆ ಯೋಜನೆಯಡಿಯಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಗರಿಷ್ಠ 38,250 ಮೆಟ್ರಿಕ್ ಟನ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳನ್ನು ರಾಜ್ಯ ಸರ್ಕಾರವು ನಿರ್ಧರಿಸಿದ ದಿನದಿಂದ 90 ದಿನಗಳ ಅವಧಿಯಲ್ಲಿ ಖರೀದಿಸಲು ಅನುಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(04)ರ ಪತ್ರದಲ್ಲಿ, ಕೇಂದ್ರ ಸರ್ಕಾರವು ಅನುಮೋದಿಸಿರುವಂತೆ 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದಲ್ಲಿ ಹೆಸರುಕಾಳನ್ನು ಖರೀದಿಸಲು, ರಾಜ್ಯದಲ್ಲಿ ಹೆಸರುಕಾಳು ಬೆಳೆಯುವ ಪ್ರಮುಖ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ, ಗದಗ, ಧಾರವಾಡ, ಹಾವೇರಿ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ಬೀದರ್, ತುಮಕೂರು, ಹಾಸನ, ಚಿತ್ರದುರ್ಗ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕೇಂದ್ರ ಹಾಗೂ ರಾಜ್ಯ ಖರೀದಿ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ವಿವರವನ್ನು ಸಲ್ಲಿಸಿ ಆದೇಶ ಹೊರಡಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದಲ್ಲಿ ಹೆಸರುಕಾಳನ್ನು ಖರೀದಿಸಲು ನಿರ್ಧರಿಸಿದ್ದು, ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ಘಟನೋತ್ತರ ಮಂಜೂರಾತಿ ಪಡೆಯುವ ಷರತ್ತಿಗೊಳಪಟ್ಟು ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಿಒ 259 ಎಂಆರ್‌ಇ 2026,ಬೆಂಗಳೂರು, ದಿನಾಂಕ: 01.10.2026</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ **ಹೆಸರುಕಾಳು** ಉತ್ಪನ್ನಕ್ಕೆ ಕೇಂದ್ರ ಸರ್ಕಾರವು ನಿಗದಿಪಡಿಸಿರುವ **ಪ್ರತಿ ಕ್ವಿಂಟಾಲ್‌ಗೆ ರೂ.8,780/- ರಂತೆ ಗರಿಷ್ಠ 38,250 ಮೆಟ್ರಿಕ್ ಟನ್** ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ, ರಾಜ್ಯದ ಕಲಬುರಗಿ, ಯಾದಗಿರಿ, ಗದಗ, ಧಾರವಾಡ, ಹಾವೇರಿ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ಬೀದರ್, ತುಮಕೂರು, ಹಾಸನ, ಚಿತ್ರದುರ್ಗ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ರೈತರಿಂದ ಖರೀದಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ .

ಹೆಸರುಕಾಳನ್ನು ಖರೀದಿಸಲು ನಾಫೆಡ್ (NAFED) ಹಾಗೂ ಎನ್.ಸಿ.ಸಿ.ಎಫ್. (NCCF) ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತ, ಬೆಂಗಳೂರು ಮತ್ತು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಯಮಿತ, ಕಲಬುರಗಿ ಈ ಸಂಸ್ಥೆಗಳನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿದೆ.

**ಕೇಂದ್ರ ಹಾಗೂ ರಾಜ್ಯ ಖರೀದಿ ಸಂಸ್ಥೆಗಳಿಗೆ ಜಿಲ್ಲಾವಾರು ಹಂಚಿಕೆ ಮಾಡಿರುವ ವಿವರಗಳು :-**

| **ನಾಫೆಡ್ ಸಂಸ್ಥೆ (NAFED)** | **ಎನ್.ಸಿ.ಸಿ.ಎಫ್. ಸಂಸ್ಥೆ (N.C.C.F.)** | |
|---|---|---|
| **ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ** | **ಕರ್ನಾಟಕ ರಾಜ್ಯ ದ್ವಿದಳ ಧಾನ್ಯಗಳ ಅಭಿವೃದ್ಧಿ ಮಂಡಳಿ** | **ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ** |
| 01. ಬೀದರ್ | 01. ಕಲಬುರಗಿ | 01. ಬಾಗಲಕೋಟೆ |
| 02. ಯಾದಗಿರಿ | | 02. ವಿಜಯಪುರ |
| 03. ಕೊಪ್ಪಳ | | 03. ಚಿತ್ರದುರ್ಗ |
| 04. ಧಾರವಾಡ | | 04. ಹಾವೇರಿ |
| 05. ಬೆಳಗಾವಿ | | 05. ಹಾಸನ |
| 06. ತುಮಕೂರು | | 06. ಮೈಸೂರು |
| 07. ಚಾಮರಾಜನಗರ | | 07. ಗದಗ |
| 08. ಕಲಬುರಗಿ | | |

**ಷರತ್ತುಗಳು:**

1. ಕಲಬುರಗಿ ಜಿಲ್ಲೆಗೆ ನೇಮಿಸಲಾದ 02 ರಾಜ್ಯ ಖರೀದಿ ಏಜೆನ್ಸಿಗಳು ಹಿಂದಿನ ಸಾಲುಗಳಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯು ಹಂಚಿಕೆ ಮಾಡಿ ನಿಗದಿಪಡಿಸಿರುವಂತೆ ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ನಿರ್ದೇಶನದಂತೆ ಹಂಚಿಕೆ ಮಾಡಿಕೊಂಡು ಕಾರ್ಯನಿರ್ವಹಿಸತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನದಿಂದ **ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ** ನಿಗದಿಪಡಿಸಿದ್ದು, ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನೂ ಸಹ ಪ್ರಾರಂಭಿಸತಕ್ಕದ್ದು.
3. ಪ್ರತಿ ಎಕರೆಗೆ **04 (ನಾಲ್ಕು) ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 20 (ಇಪ್ಪತ್ತು) ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು** ಖರೀದಿ ಪ್ರಮಾಣ ನಿಗದಿಪಡಿಸಿ ಖರೀದಿಸತಕ್ಕದ್ದು.
4. ರೈತರ ನೋಂದಣಿಯ ಆದ್ಯತೆಯ ಆಧಾರದ ಮೇಲೆ, ಮೊದಲು ನೋಂದಣಿ ಮಾಡಿಕೊಂಡ ರೈತರಿಗೆ ಖರೀದಿಯಲ್ಲಿ ಮೊದಲ ಆದ್ಯತೆ (First Come, First Served) ನೀಡತಕ್ಕದ್ದು.
5. ಹೆಸರುಕಾಳು ಖರೀದಿಸುವ ಪೂರ್ವದಲ್ಲಿ ನಾಫೆಡ್ (NAFED) ಮತ್ತು ಎನ್.ಸಿ.ಸಿ.ಎಫ್ (NCCF) ಸಂಸ್ಥೆರವರು ಕ್ರಮವಾಗಿ ಅಭಿವೃದ್ಧಿಪಡಿಸಿರುವ ಇ-ಸಮೃದ್ಧಿ ಹಾಗೂ ಇ-ಸಂಯುಕ್ತಿ ದತ್ತಾಂಶದಲ್ಲಿ ರಾಜ್ಯದ ರೈತರ ಮಾಹಿತಿಯನ್ನು FRUITS ತಂತ್ರಾಂಶದೊಂದಿಗೆ ಸಂಯೋಜಿಸಿಕೊಂಡು, ಭೂಮಿ, ಬೆಳೆ ಸಮೀಕ್ಷೆ ದತ್ತಾಂಶ ಮತ್ತು UIDAIದೊಂದಿಗೆ ತಾಳೆ ಮಾಡಿ ವಿವರಗಳನ್ನು ಇಂದೀಕರಿಸಿಕೊಂಡು ರೈತರ ನೋಂದಣಿ ಮತ್ತು ಖರೀದಿ ಕೈಗೊಳ್ಳತಕ್ಕದ್ದು.

G N. [signature]

6. ಕೇಂದ್ರ ಖರೀದಿ ಏಜೆನ್ಸಿಗಳ ಪೋರ್ಟಲ್‌ನಲ್ಲಿ ಪ್ರತಿಯೊಂದು ಖರೀದಿ ಕೇಂದ್ರಗಳಲ್ಲಿಯೂ POS ಯಂತ್ರಗಳ ಮೂಲಕ UIDAI ಆಧಾರಿತ Biometric/face authentication ಮೂಲಕ ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು.
7. ಖರೀದಿ ಸಂಸ್ಥೆಗಳು ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ನಾಫೆಡ್ ಹಾಗೂ ಎನ್.ಸಿ.ಸಿ.ಎಫ್. ಮಾರ್ಗಸೂಚಿಯನ್ವಯ ಹಾಗೂ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಗೋದಾಮುಗಳನ್ನು ಹೊಂದಿರುವ ಸದೃಢ **PACS/ OGCS/ TAPCMS/ FPO/ Agricultural Produce Co-operative Marketing & Processing Societies** ಸಂಸ್ಥೆಗಳ ಮುಖಾಂತರ ಒಡಂಬಡಿಕೆ ಮಾಡಿಕೊಂಡು ಖರೀದಿ ಕೇಂದ್ರಗಳನ್ನು ತೆರೆಯಲು ಕ್ರಮವಹಿಸತಕ್ಕದ್ದು.
8. ಹೆಸರುಕಾಳು ಖರೀದಿ ಪ್ರಕ್ರಿಯೆಯಲ್ಲಿ ಎಫ್‌ಎಕ್ಯೂ ಗುಣಮಟ್ಟದ ಪರಿಶೀಲನೆಗಾಗಿ ಜಿಲ್ಲಾಡಳಿತ ಮಟ್ಟದಲ್ಲಿ ಕೃಷಿ / ತೋಟಗಾರಿಕೆ ಇಲಾಖೆಗಳಲ್ಲಿ ಲಭ್ಯವಿರುವ ಅಧಿಕಾರಿ / ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ತರಬೇತಿ ಅವಶ್ಯವಿದ್ದಲ್ಲಿ ಅಂತಹ ಸಿಬ್ಬಂದಿಗಳಿಗೆ ಸೂಕ್ತ ಎಫ್.ಎ.ಕ್ಯೂ ಗ್ರೇಡಿಂಗ್ ತರಬೇತಿ ನೀಡಲು ಸಂಬಂಧಪಟ್ಟ ಖರೀದಿ ಸಂಸ್ಥೆಗಳು ಕ್ರಮವಹಿಸತಕ್ಕದ್ದು.
9. ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯು ಸಂಬಂಧಪಟ್ಟ ಜಿಲ್ಲೆಗಳಲ್ಲಿ ಅವಶ್ಯಕತೆಗನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ನಾಫೆಡ್ ಸಂಸ್ಥೆ, ಎನ್.ಸಿ.ಸಿ.ಎಫ್. ಸಂಸ್ಥೆ ಹಾಗೂ ಖರೀದಿ ಏಜೆನ್ಸಿಯೊಂದಿಗೆ ಸಮಾಲೋಚಿಸಿ ನಿರ್ಧರಿಸಿಕೊಂಡು, **ಈ ಆದೇಶ ಹೊರಡಿಸಿದ ದಿನಾಂಕದಿಂದ 03 ದಿನಗಳೊಳಗಾಗಿ** ಖರೀದಿ ಕೇಂದ್ರಗಳನ್ನು ತೆರೆದು ನೋಂದಣಿ ಕಾರ್ಯ ಪ್ರಾರಂಭಿಸತಕ್ಕದ್ದು.
10. ಬೆಂಬಲ ಬೆಲೆ ಯೋಜನೆಯ ಮಾರ್ಗಸೂಚಿಗಳಂತೆ, ಖರೀದಿಸಿದ ಉತ್ಪನ್ನದ ಮೌಲ್ಯವನ್ನು ರೈತರಿಗೆ 03 ದಿನದ ಒಳಗಾಗಿ ಆಧಾರ್ ಜೋಡಣೆಯ ಬ್ಯಾಂಕ್ ಖಾತೆಗೆ ಕೇಂದ್ರ ಖರೀದಿ ಏಜೆನ್ಸಿಗಳಾದ NAFED ಹಾಗೂ NCCF ಸಂಸ್ಥೆಗಳು ರಾಜ್ಯದ ಇ-ಆಡಳಿತ ಇಲಾಖೆ ಮೂಲಕ ಸಿದ್ದಪಡಿಸಿರುವ DBT ಪೋರ್ಟಲ್ ಬಳಸಿಕೊಂಡು ರೈತರಿಗೆ ಖರೀದಿಸಲಾದ ಉತ್ಪನ್ನದ ಮೊತ್ತವನ್ನು ಪಾವತಿ ಮಾಡತಕ್ಕದ್ದು ಹಾಗೂ ಬೆಂಬಲ ಬೆಲೆ ಯೋಜನೆಯ ಹಾಗೂ ಆವರ್ತನಿಧಿ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
11. ಕೇಂದ್ರ ಸರ್ಕಾರದ PSS ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (SC/ST) ಫಲಾನುಭವಿಗಳ ಮಾಹಿತಿಯನ್ನು ಕೇಂದ್ರ ನೋಡಲ್ ಏಜೆನ್ಸಿಗಳು ಹಾಗೂ ರಾಜ್ಯ ಖರೀದಿ ಏಜೆನ್ಸಿ ಕಡ್ಡಾಯವಾಗಿ ದಾಖಲಿಸಿಕೊಳ್ಳತಕ್ಕದ್ದು.
12. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ, ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹೆಸರುಕಾಳು ಖರೀದಿ ಪ್ರಕ್ರಿಯೆಯಲ್ಲಿ ವಿಧಿಸುವ State Duties, Taxes & Market Fees ಗೆ ವಿನಾಯಿತಿ ನೀಡಲಾಗಿದೆ.
13. ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸುವ ಉತ್ಪನ್ನಗಳನ್ನು ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ, ಕೇಂದ್ರ/ರಾಜ್ಯ ಉಗ್ರಾಣಗಳ ಸಮೀಪ ಅಂದರೆ, 50 ಕಿ.ಮೀ. ವ್ಯಾಪ್ತಿಯೊಳಗೆ ವೈಜ್ಞಾನಿಕವಾಗಿ ಶೇಖರಿಸಲು ಕ್ರಮವಹಿಸತಕ್ಕದ್ದು. ಒಂದು ವೇಳೆ 50 ಕಿ.ಮೀ. ಗಿಂತ ಹೆಚ್ಚಿನ ದೂರದಲ್ಲಿ ದಾಸ್ತಾನು ಮಾಡುವ ಉತ್ಪನ್ನಗಳ ಸಾಗಾಣಿಕಾ ವೆಚ್ಚವನ್ನು ಪ್ರಕರಣವಾರು ಪರಿಶೀಲಿಸಿ, ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
14. ಹೆಸರುಕಾಳು ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಹೆಸರುಕಾಳು ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗ ಆಗದಂತೆ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸತಕ್ಕದ್ದು.
15. ಹೆಸರುಕಾಳು ಉತ್ಪನ್ನವನ್ನು ಬೆಂಬಲ ಬೆಲೆ ಯೋಜನೆಯಡಿ ಸರ್ಕಾರದ ಆದೇಶ ಹಾಗೂ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಖರೀದಿಸಲಾಗಿದೆಯೇ? ಎಂಬ ಬಗ್ಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ನಿರಂತರವಾಗಿ ನಿಗಾವಹಿಸುವುದು ಮತ್ತು ಖರೀದಿ ಪ್ರಕ್ರಿಯೆ ಮುಕ್ತಾಯವಾದ ನಂತರ ಖರೀದಿಸಿದ ಪ್ರಮಾಣ ಮತ್ತು ಗುಣಮಟ್ಟದ ಬಗ್ಗೆ ಖಾತರಿಪಡಿಸಿಕೊಂಡು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಮೂಲಕ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.
16. ಈ ಯೋಜನೆಯಡಿಯಲ್ಲಿ ಹೆಸರುಕಾಳು ಖರೀದಿಸುವ ಪ್ರಗತಿಯ ವಿವರವನ್ನು ಸಂಬಂಧಿಸಿದ ರಾಜ್ಯ ಖರೀದಿ ಏಜೆನ್ಸಿಗಳು ಪ್ರತಿದಿನ ಸರ್ಕಾರಕ್ಕೆ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ e-Mail ಮೂಲಕ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

G.N. Dhanalakshmi

(ಜಿ.ಎನ್.ಧನಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಹಕಾರ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

ದಿಸುತ್ತಿದ್ದು, ಇವುಗಳ ಮೇಲ್ವಿಚಾರಣೆಯನ್ನು ಕೈಗೊಳ್ಳಲು ನೋಡಲ್ ಅಧಿಕಾರಿಯಾಗಿ ನೇಮಿಸಲು ಜಿಲ್ಲಾ ಟಾಸ್ಕ್‌ಫೋರ್ಸ್ ಮಿತಿ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಗ್ರಾಮೀಣ ಪ್ರದೇಶದಲ್ಲಿರುವ ಈ ಕೆಳಗಿನ 30 ಖರೀದಿ ಕೇಂದ್ರಗಳ ಮೂಲಕ ಹೆಸರುಕಾಳು ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಖರೀದಿ ಕೇಂದ್ರಗಳನ್ನು ಆಯ್ಕೆ ಮಾಡುವುದು ರೈತರ ಹಿತ ದೃಷ್ಟಿಯಿಂದ ಸಮಂಜಸವೆಂದು ಸಭೆಯು ಅಭಿಪ್ರಾಯಪಡುತ್ತಾ, ಈ ಕೆಳಕಾಣಿಸಿದ ಖರೀದಿ ಕೇಂದ್ರಗಳನ್ನು ಆಯ್ಕೆ ಮಾಡಿ, ಸಭೆಯು ಸರ್ವಾನುಮತದಿಂದ ಒಪ್ಪಿ ತೀರ್ಮಾನಿಸಲಾಯಿತು.

| ಕ್ರ.ಸಂ. | ತಾಲ್ಲೂಕು | ಖರೀದಿ ಕೇಂದ್ರಗಳ ಹೆಸರು. | ಉಗ್ರಾಣ | ಕಿ.ಮೀಟರ್ |
|---|---|---|---|---|
| 01 | ಬೀದರ. | PACS ಬಗದಲ್ | ಸಿಡಬ್ಲ್ಯೂಸಿ | 20.ಕಿ.ಮೀ. |
| 02 | | PACS ಜನವಾಡಾ | ” | 15.ಕಿ.ಮೀ. |
| 03 | | PACS ಮಾಳೆಗಾಂವ್ | ” | 15.ಕಿ.ಮೀ. |
| 04 | | PACS ಮನ್ನಳ್ಳಿ | ” | 25.ಕಿ.ಮೀ. |
| 05 | | PACS ಅಣದೂರ | ” | 16.ಕಿ.ಮೀ. |
| 06 | | PACS ಕಮಠಾಣಾ | ” | 12.ಕಿ.ಮೀ. |
| 07 | ಭಾಲ್ಕಿ | PACS ಲಖನಗಾಂವ್ | ” | 65.ಕಿ.ಮೀ. |
| 08 | | FPO ಹಲಬರ್ಗಾ (ಸಹಯೋಗ ಸುವಿಧಾ ಉತ್ಪಾದಕರ ಕಂ, ಲಿ,) | ” | 30.ಕಿ.ಮೀ. |
| 09 | | PACS ಖಟಕಚಿಂಚೋಳಿ | ” | 40.ಕಿ.ಮೀ. |
| 10 | | PACS ಕುರುಬಖೇಳಗಿ | ” | 50.ಕಿ.ಮೀ. |
| 11 | | PACS ಸಾಯಿಗಾಂವ್ | ” | 66.ಕಿ.ಮೀ. |
| 12 | | PACS ಭಾತಂಬ್ರಾ | ” | 50.ಕಿ.ಮೀ. |
| 13 | ಹುಮನಾಬಾದ | PACS ನಿರ್ಣಾ | ” | 40.ಕಿ.ಮೀ. |
| 14 | | PACS ದುಬಲಗುಂಡಿ | ” | 42.ಕಿ.ಮೀ. |
| 15 | | PACS ಚಿಟಗುಪ್ಪಾ | ” | 53.ಕಿ.ಮೀ. |
| 16 | | PACS ಘಾಟಬೋರಾಳ್ | ” | 65.ಕಿ.ಮೀ. |
| 17 | | PACS ಹಳ್ಳಿಖೇಡ(ಬಿ) | ” | 33.ಕಿ.ಮೀ. |
| 18 | | PACS ಬೇಮಳಖೇಡ | ” | 35.ಕಿ.ಮೀ. |
| 19 | ಬಸವಕಲ್ಯಾಣ | PACS ಮುಡಬಿ | ” | 78.ಕಿ.ಮೀ. |
| 20 | | PACS ಕೋಹಿನೂರ್ | ” | 94.ಕಿ.ಮೀ. |
| 21 | | PACS ಮಂಠಾಳ್ | ” | 85.ಕಿ.ಮೀ. |
| 22 | | PACS ರಾಜೇಶ್ವರ | ” | 62.ಕಿ.ಮೀ. |
| 23 | | PACS ಹುಲಸೂರ್ | ” | 70.ಕಿ.ಮೀ. |
| 24 | | PACS ಮುಚಳಂಬ | ” | 67.ಕಿ.ಮೀ. |
| 25 | ಔರಾದ(ಬಾ) | PACS ಔರದ(ಬಾ) | ” | 42.ಕಿ.ಮೀ. |
| 26 | | PACS ಚಿಂತಾಕಿ | ” | 45.ಕಿ.ಮೀ. |
| 27 | | PACS ಸಂತಪೂರ್ | ” | 31.ಕಿ.ಮೀ. |
| 28 | | PACS ಠಾಣಾಕುಶನೂರ್ | ” | 43.ಕಿ.ಮೀ. |
| 29 | | PACS ಮುಧೋಳ(ಬಿ) | ” | 54.ಕಿ.ಮೀ. |
| 30 | | TAPCMS ಕಮಲನಗರ | ” | 58.ಕಿ.ಮೀ. |